# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 2002 (2358)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳಿಲ್ಲದಿರುವ ಬಗ್ಗೆ

(ಅ) ಸ್ವಚ್ಛ ಭಾರತ್ ಆಂದೋಲನ ನಂತರವೂ ರಾಜ್ಯದಲ್ಲಿ ಬಹಳಷ್ಟು ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳಿಲ್ಲದಿರುವ ಕುರಿತು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅನೇಕ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳಿದ್ದರೂ ನಿರ್ವಹಣೆಯ ಕೊರತೆಯಿಂದ ಉಪಯೋಗಕ್ಕೆ ಬಾರದ ಸ್ಥಿತಿಯಲ್ಲಿದ್ದು, ಸ್ವಚ್ಛತೆಯ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಇಲಾಖೆಯ ವರದಿಗಳ ಪ್ರಕಾರ ರಾಜ್ಯದಲ್ಲಿ ಶೌಚಾಲಯ ರಹಿತ ಶಾಲೆಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳ ಅವಧಿಯಲ್ಲಿ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳ ನಿರ್ಮಾಣ ಹಾಗೂ ನಿರ್ವಹಣೆಗೆ ನೀಡಲಾದ ಅನುದಾನವೆಷ್ಟು ; (ಮಾಹಿತಿ ನೀಡುವುದು)

(ಉ) ಬೆಳಗಾವಿ ಜಿಲ್ಲೆಯಲ್ಲಿ ಶೌಚಾಲಯರಹಿತ ಸರ್ಕಾರಿ ಶಾಲೆಗಳು ಎಷ್ಟು; ಕಳೆದ ಎರಡು ವರ್ಷಗಳ ಅವಧಿಯಲ್ಲಿ ಶೌಚಾಲಯಗಳ ನಿರ್ಮಾಣ ಮತ್ತು ನಿರ್ವಹಣೆಗೆ ನೀಡಲಾಗಿರುವ ಅನುದಾನದ ಮೊತ್ತವೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)